**ಕರ್ನಾಟಕ ಸರ್ಕಾರ**

# ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.

ಸಂಖ್ಯೆ:-ಎಡಿಎಂ2(1)ರಾಜ್ಯ/ರಾಷ್ಟ್ರ/ವಿ.ನಿ.ಶಿ-58/2017-18/21-22. ದಿನಾಂಕ:-06-07-2021.

## ಜ್ಞಾಪನ

ವಿಷಯ:-ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಪ್ರಾಥಮಿಕ ಮತ್ತು ಪ್ರೌಢಶಾಲಾ ನಿವೃತ್ತ ಶಿಕ್ಷಕರು ಶೈಕ್ಷಣಿಕ ಉದ್ದೇಶಗಳಿಗೆ ಕ.ರಾ.ರ.ಸಾ.ಸಂಸ್ಥೆಗಳಲ್ಲಿ ಮಾಡುವ ಪ್ರಯಾಣದ ವೆಚ್ಚವನ್ನು ಮರು-ಭರಿಸುವ ಬಗ್ಗೆ.

ಉಲ್ಲೇಖ:-1. ಸರ್ಕಾರದ ಆದೇಶ / ತಿದ್ದುಪಡಿ ಆದೇಶ ಸಂಖ್ಯೆ: ಇಡಿ 231 ಪಿಬಿಎಸ್ 2016(2018). ಬೆಂಗಳೂರು, ದಿನಾಂಕ: 22.09.2018 & 17.09.2019.

2. ಈ ಕಛೇರಿಯ ಇದೇ ಸಮ ಸಂಖ್ಯೆಯ ಪತ್ರ ದಿನಾಂಕ:19.11.2018.

3. ಸರ್ಕಾರದ ಆದೇಶ ಸಂಖ್ಯೆ: ಇಪಿ 45 ಯೋಸಕ 2021. ಬೆಂಗಳೂರು, ದಿನಾಂಕ:09.03.2021.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯ ಮತ್ತು ರಾಷ್ಟ್ರ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪಡೆದ ರಾಜ್ಯದ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ನಿವೃತ್ತ ಶಿಕ್ಷಕರಿಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸಲು ಉಚಿತ ಬಸ್‌ಪಾಸ್‌ಗಳನ್ನು ನೀಡುವ ಸಂಬಂಧ ಹೊರಡಿಸಲಾದ ಉಲ್ಲೇಖ-01 ರಲ್ಲಿನ ಸರ್ಕಾರದ ಆದೇಶ ಮತ್ತು ತಿದ್ದುಪಡಿ ಆದೇಶಗಳನ್ನು ಯಥಾವತ್ತಾಗಿ ಹಿಂಪಡೆಯಲಾಗಿದೆ ಎಂದು ಉಲ್ಲೇಖ-01 ರ ಸರ್ಕಾರದ ಆದೇಶದಲ್ಲಿ ತಿಳಿಸಲಾಗಿದೆ.

ಈ ಹಿನ್ನಲೆಯಲ್ಲಿ ಉಲ್ಲೇಖ-01 ರ ಸರ್ಕಾರದ ಆದೇಶವನ್ನು ಅನುಷ್ಠಾನಗೊಳಿಸುವಂತೆ ತಿಳಿಸಲಾಗಿದ್ದ ಉಲ್ಲೇಖ-02 ರ ಈ ಕಛೇರಿಯ ಜ್ಞಾಪನವನ್ನು ಸಹ ಹಿಂಪಡೆಯಲಾಗಿದೆ.

ಮುಂದುವರೆದು, ರಾಜ್ಯ ಮತ್ತು ರಾಷ್ಟ್ರ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪಡೆದ ರಾಜ್ಯದ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ನಿವೃತ್ತ ಶಿಕ್ಷಕರು ಶೈಕ್ಷಣಿಕ ಕಾರ್ಯಕ್ರಮ, ಸರ್ಕಾರಿ ಶಾಲೆ/ಇಲಾಖೆಯ ಕಾರ್ಯಕ್ರಮಗಳು, ಶೈಕ್ಷಣಿಕ ತರಬೇತಿ/ಉಪನ್ಯಾಸ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸುವಂತಹವರಿಗೆ ಮಾತ್ರ ಅನ್ವಯವಾಗುವಂತೆ ಪ್ರಯಾಣದ ವೆಚ್ಚವನ್ನು ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಮತ್ತು ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿಯಿಂದ ಮರು-ಭರಿಸಲು ಅನುಮತಿ ನೀಡಿ ಆದೇಶಿಸಲಾಗಿದೆ.

ಈ ಸಂಬಂಧ ಸದರಿ ಶಿಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಸದರಿ ನಿಧಿಗಳ ಕಛೇರಿಯಿಂದ ವಹಿಸಬೇಕಾದ ಕ್ರಮಗಳ ಕುರಿತು ಉಲ್ಲೇಖ-03 ರ ಸರ್ಕಾರದ ಆದೇಶದಲ್ಲಿ ವಿವರವಾಗಿ ತಿಳಿಸಲಾಗಿದೆ ಮತ್ತು ಸದರಿ ಪ್ರಯಾಣ ವೆಚ್ಚವನ್ನು ಮರು-ಭರಿಸುವ ಸಂಬಂಧ ಅನುಸರಿಸಬೇಕಾದ ಕ್ರಮಗಳ ಕುರಿತು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಸೂಕ್ತ ಜ್ಞಾಪನ / ಸುತ್ತೋಲೆಯನ್ನು ಹೊರಡಿಸಲು ಸಹ ಉಲ್ಲೇಖ-03 ರ ಸರ್ಕಾರದ ಆದೇಶದಲ್ಲಿ ತಿಳಿಸಲಾಗಿದೆ.

ಪ್ರಯುಕ್ತ ಕೆಳಕಂಡ ಕಾರ್ಯವಿಧಾನವನ್ನು ಅನುಸರಿಸಿ / ದಾಖಲೆಗಳ ಆಧಾರದ ಮೇಲೆ ಇಂತಹ ಪ್ರಯಾಣ ವೆಚ್ಚವನ್ನು ನಿಯಮಾನುಸಾರ ಮರು-ಭರಿಸಲು ಸೂಕ್ತ ಕ್ರಮವಹಿಸಲು ಸಂಬಂಧಿಸಿದವರಿಗೆ ತಿಳಿಸಲಾಗಿದೆ.

1. ರಾಜ್ಯ / ರಾಷ್ಟ್ರ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರಮಾಣಪತ್ರಗಳ ಹಾಗೂ ಪಿಂಚಣಿ ದಾಖಲೆಗಳ ದೃಢೀಕೃತ ಪ್ರತಿ.
2. ಶೈಕ್ಷಣಿಕ ಕಾರ್ಯಕ್ರಮ, ಸರ್ಕಾರಿ ಶಾಲೆ / ಇಲಾಖೆಯ ಕಾರ್ಯಕ್ರಮಗಳು, ಶೈಕ್ಷಣಿಕ ತರಬೇತಿ / ಉಪನ್ಯಾಸ ಕಾರ್ಯಕ್ರಮ ನಡೆದಿರುವುದಕ್ಕೆ / ಭಾಗವಹಿಸಿರುವುದಕ್ಕೆ ಸೂಕ್ತ ದಾಖಲೆಗಳ ದೃಢೀಕೃತ ಪ್ರತಿ. (ಸದರಿ ನಿವೃತ್ತರ ಆರೋಗ್ಯದ ಹಿತದೃಷ್ಟಿಯಿಂದ ಇಂತಹ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದು ಅಂತಿಮವಾಗಿ ಅವರ ಸ್ವಇಚ್ಛೆಯಾಗಿದ್ದು, ಕಡ್ಡಾಯವಾಗಿರುವುದಿಲ್ಲ. ಆದ್ದರಿಂದ ಭಾಗವಹಿಸುವ ಸಂದರ್ಭದಲ್ಲಿ ತಮ್ಮ ಆರೋಗ್ಯ ಸುಸ್ಥಿತಿಯಲ್ಲಿ ಇರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು).
3. ಸದರಿ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಕ.ರಾ.ರ.ಸಾ.ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣ ಮಾಡಿರುವ ಕುರಿತಾದ ಟಿಕೆಟುಗಳನ್ನು ಒಳಗೊಂಡ ಪ್ರಯಾಣ ವೆಚ್ಚದ ಬಿಲ್ಲುಗಳು.
4. ಪ್ರಶಸ್ತಿ ಪುರಸ್ಕೃತ ಶಿಕ್ಷಕರ ಬ್ಯಾಂಕ್ ಖಾತೆ ವಿವರಗಳನ್ನು ಒಳಗೊಂಡ (ಸಂಪೂರ್ಣ ಖಾತೆ ಸಂಖ್ಯೆ, ಬ್ಯಾಂಕ್ ಮತ್ತು ಶಾಖೆ ವಿವರ, ಎಂ.ಐ.ಸಿ.ಆರ್ / ಐ.ಎಫ್.ಎಸ್.ಸಿ ಸಂಖ್ಯೆಗಳ ವಿವರಗಳು) ಬ್ಯಾಂಕ್ ಪಾಸ್ ಪುಸ್ತಕದ ದೃಢೀಕೃತ ಪ್ರತಿ.
5. ವಾಸಸ್ಥಳದ ದೃಢೀಕರಣಕ್ಕೆ ಸರ್ಕಾರ ನಿಗದಿಪಡಿಸಿರುವ ಯಾವುದಾದರೂ ಒಂದು ದಾಖಲೆಯ ದೃಢೀಕೃತ ಪ್ರತಿ.
6. ಅರ್ಜಿದಾರರು ಈ ದಾಖಲೆಗಳೊಂದಿಗೆ ತಾವು ನಿವೃತ್ತರಾದ / ಪಿಂಚಣಿ ಪಡೆಯುತ್ತಿರುವ / ವಾಸಿಸುತ್ತಿರುವ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸದರಿ ಪ್ರಯಾಣ ವೆಚ್ಚವನ್ನು ಮಂಜೂರು ಮಾಡುವಂತೆ ಕೋರಿ ಅರ್ಜಿ ಸಲ್ಲಿಸಬಹುದಾಗಿದೆ.
7. ಕ್ಷೇತ್ರ ಶಿಕ್ಷಣಾಧಿಕಾರಿಗಳು ಇಂತಹ ಪ್ರಸ್ತಾವನೆಯನ್ನು ನಿಯಮಾನುಸಾರ ಪರಿಶೀಲಿಸಿ ಕ್ರಮಬದ್ಧವಾಗಿರುವುದನ್ನು ಖಚಿತಪಡಿಸಿಕೊಂಡು "ಸಿ" ದರ್ಜೆಯ ಸರ್ಕಾರಿ ನೌಕರರಿಗೆ ಕಾಲಕಾಲಕ್ಕೆ ಅನ್ವಯವಾಗುವ ದರಗಳಂತೆ (ವಾಸಸ್ಥಳದಿಂದ ಕಾರ್ಯಕ್ರಮ ನಡೆಯುವ ಸ್ಥಳಕ್ಕೆ ಹೋಗಿ-ಬರುವ) ಪ್ರಯಾಣ ವೆಚ್ಚವನ್ನು ಮಂಜೂರು ಮಾಡಲು ದೃಢೀಕರಿಸಿ ಕಾಲವಿಳಂಬವಿಲ್ಲದೆ ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಮತ್ತು ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ ಹಾಗೂ ರಾಷ್ಟ್ರೀಯ ಶಿಕ್ಷಕರ ಕಲ್ಯಾಣ ಪ್ರತಿಷ್ಠಾನ, ಶಿಕ್ಷಕರ ಸದನ, ಕೆ.ಜಿ. ರಸ್ತೆ, ಬೆಂಗಳೂರು ಈ ಕಛೇರಿಗೆ ಸಲ್ಲಿಸಲು ಕ್ರಮವಹಿಸುವುದು.
8. ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಮತ್ತು ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ ಹಾಗೂ ರಾಷ್ಟ್ರೀಯ ಶಿಕ್ಷಕರ ಕಲ್ಯಾಣ ಪ್ರತಿಷ್ಠಾನ, ಶಿಕ್ಷಕರ ಸದನ, ಕೆ.ಜಿ. ರಸ್ತೆ, ಬೆಂಗಳೂರು ಈ ಕಛೇರಿಯು ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಸ್ವೀಕೃತವಾಗುವ ಇಂತಹ ಪ್ರಸ್ತಾವನೆಗಳನ್ನು ನಿಯಮಾನುಸಾರ ಪರಿಶೀಲಿಸಿ "ಸಿ" ದರ್ಜೆಯ ಸರ್ಕಾರಿ ನೌಕರರಿಗೆ ಕಾಲಕಾಲಕ್ಕೆ ಅನ್ವಯವಾಗುವ ದರಗಳಂತೆ ನಿಯಮಾನುಸಾರ ಪ್ರಯಾಣ ವೆಚ್ಚವನ್ನು ಮಂಜೂರು ಮಾಡಿ ಅರ್ಜಿದಾರರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಹಣ ಜಮಾ ಮಾಡುವುದು.
9. ಈ ಎಲ್ಲಾ ಅಂಶಗಳನ್ನು ಪಾಲಿಸಲು ಸಂದರ್ಭಾನುಸಾರ ಅಗತ್ಯ ಮಾರ್ಗದರ್ಶನವನ್ನು ನೀಡಲು ಆಯಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರಿಗೆ ತಿಳಿಸಲಾಗಿದೆ.

(ಆಯುಕ್ತರ ಆದೇಶಾನುಸಾರ)

ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)

**ಇವರಿಗೆ,**

01. ಸಹ / ಉಪ ನಿರ್ದೇಶಕರು ಹಾಗೂ ವಿಶೇಷಾಧಿಕಾರಿಗಳು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಮತ್ತು ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ ಹಾಗೂ ರಾಷ್ಟ್ರೀಯ ಶಿಕ್ಷಕರ ಕಲ್ಯಾಣ ಪ್ರತಿಷ್ಠಾನ, ಶಿಕ್ಷಕರ ಸದನ, ಕೆ.ಜಿ. ರಸ್ತೆ, ಬೆಂಗಳೂರು ಇವರಿಗೆ ಅಗತ್ಯ ಕ್ರಮಕ್ಕಾಗಿ.

02. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಅಗತ್ಯ ಕ್ರಮಕ್ಕಾಗಿ.

03. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಸಂಬಂಧಿಸಿದ ಉಪನಿರ್ದೇಶಕರು(ಆಡಳಿತ) ಇವರ ಮುಖಾಂತರ ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು ಮಾಹಿತಿಗಾಗಿ,**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ), 6 ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
2. ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಗೌರವಪೂರ್ವಕವಾಗಿ ಸಲ್ಲಿಸುತ್ತಾ ಮಾನ್ಯ ಸಚಿವರ ಆದ್ಯ ಗಮನಕ್ಕೆ ತರಲು ಕೋರಲಾಗಿದೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಾರಿಗೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
4. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
5. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚಗಳು), ವಿಧಾನ ಸೌಧ, ಬೆಂಗಳೂರು ಇವರಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
6. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತಾ ಇಲಾಖೆ, ಟಿ.ಟಿ.ಎಂ.ಸಿ ಕಟ್ಟಡ, ಕೆ.ಹೆಚ್.ರಸ್ತೆ, ಶಾಂತಿ ನಗರ, ಬೆಂಗಳೂರು ಇವರಿಗೆ.
7. ಆಯುಕ್ತರು / ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು ಇವರಿಗೆ. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇವರಿಗೆ.
8. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರಗಿ ಇವರಿಗೆ.
9. ನಿರ್ದೇಶಕರು(ಪ್ರೌಢಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ.
10. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ., ಬನಶಂಕರಿ 80 ಅಡಿ ಹೊರ ವರ್ತುಲ ರಸ್ತೆ, ಬೆಂಗಳೂರು ಇವರಿಗೆ.
11. ರಾಜ್ಯದ ಎಲ್ಲಾ ಡಯಟ್‌ಗಳ ಪ್ರಾಂಶುಪಾಲರು ಮತ್ತು ಪದನಿಮಿತ್ತ ಉಪನಿರ್ದೇಶಕರು (ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಮಾಹಿತಿಗಾಗಿ.
12. ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಎಲ್ಲಾ ನಿವೃತ್ತ ಶಿಕ್ಷಕರಿಗೆ.
13. ಕಛೇರಿ ಪ್ರತಿ. (080-22246975). (080- 22483434).